ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಹೇಮಾವತಿ ಜಲಾಶಯ ಮುಳುಗಡೆ ಸಂತ್ರಸ್ಥರ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

280 (355) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೇಮಾವತಿ ಜಲಾಶಯ ಮುಳುಗಡೆ ಸಂತ್ರಸ್ಥರಿಗೆ ಹಾಸನ ಜಿಲ್ಲೆಯಲ್ಲಿ ಕಾಯ್ದಿರಿಸಿದ ಭೂಮಿ ಎಷ್ಟು ; ಇದುವರೆಗೂ ಎಷ್ಟು ಸಂತ್ರಸ್ಥರಿಗೆ ಹಕ್ಕುಪತ್ರ ನೀಡಲಾಗಿದೆ ; ಹಕ್ಕುಪತ್ರ ಪಡೆಯಲು ಬಾಕಿ ಇರುವ ಸಂತ್ರಸ್ಥರೆಷ್ಟು ; (ವಿವರ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ಹೇಮಾವತಿ ನದಿಯ ಪ್ರವಾಹದಿಂದ ಆಗಿರುವ ಸರ್ಕಾರದ ಮತ್ತು ಸಾರ್ವಜನಿಕರ ಹೊಲ-ಮನೆ ಮತ್ತು ಬೆಳೆನಾಶದ ಅಂದಾಜು ಮೊತ್ತವೆಷ್ಟು ; ಇದರ ಪರಿಹಾರಕ್ಕಾಗಿ ಸರ್ಕಾರವು ಬಿಡುಗಡೆ ಮಾಡಿದ ಅನುದಾನವೆಷ್ಟು ; (ವರ್ಷವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಇ) ಹೇಮಾವತಿ ನದಿಯ ಪ್ರವಾಹದಿಂದ ಉಂಟಾಗುತ್ತಿರುವ ಅನಾಹುತಗಳನ್ನು ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)